# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು – 572 103

ಸಂಖ್ಯೆ:ತುವಿತು:ಸಂ.ವಿ:2025-26/513 ದಿನಾಂಕ: 15.09.2025

## ಸುತ್ತೋಲೆ

**ವಿಷಯ:** ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ ಹಾಗೂ ಟ್ರಾನ್ಸ್ ಜೆಂಡರ್ಸ್ ರವರ ಬೇಸ್‌ಲೈನ್ ಸರ್ವೆಯಲ್ಲಿ ವಿಶ್ವವಿದ್ಯಾನಿಲಯದ ಅಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಳ್ಳುವ ಕುರಿತು.

**ಉಲ್ಲೇಖ:** ಕಡತ ಸಂಖ್ಯೆ:ಮಅನಿ/ದೇ.ಪು.ಯೋ/ಟಿ.ಜಿ/ಸರ್ವೆ/3/2025-26 ದಿನಾಂಕ: 20.08.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೊದಲ ಬಾರಿಗೆ ರಾಜ್ಯಾದ್ಯಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ ಹಾಗೂ ಹದಿನೈದು ಜಿಲ್ಲೆಗಳಲ್ಲಿ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆ (ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲ್ಬುರ್ಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ ಮತ್ತು ವಿಜಯನಗರ) ಯನ್ನು ಸದರಿಯವರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ ಪುನರ್ ವಸತಿ (ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ) ಕಲ್ಪಿಸಲು ಸಮೀಕ್ಷೆಯನ್ನು ನಡೆಸಲಾಗುತ್ತಿದೆ.

ಎರಡೂ ಸಮೀಕ್ಷೆಗಳನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ನಡೆಸಲಾಗುವುದು. ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳೊಂದಿಗೆ ಲಿಂಗತ್ವ ಅಲ್ಪಸಂಖ್ಯಾತರ **ಮೂಲ ಹಂತದ ಸಮೀಕ್ಷೆಯನ್ನು ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳು ಮತ್ತು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ** ನಡೆಸಲಾಗುತ್ತದೆ ಹಾಗೂ ಮಾಜಿ ದೇವದಾಸಿ **ಮಹಿಳೆಯರ ಮರುಸಮೀಕ್ಷೆಯನ್ನು ಹದಿನೈದು ಜಿಲ್ಲೆಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಯಲ್ಲಿ** ನಡೆಸಲಾಗುತ್ತದೆ.

ಮುಂದುವರದು, ಈ ಎರಡೂ ಸಮೀಕ್ಷೆಗಳನ್ನು ಸೆಪ್ಟೆಂಬರ್ 10 ರಿಂದ ಪ್ರಾರಂಭಿಸಿ 45 ಕಛೇರಿ ಕೆಲಸದ ದಿನಗಳಲ್ಲಿ (Working Days) ಮುಕ್ತಾಯಗೊಳಿಸಲಾಗುವುದು.

ಈ ಮೇಲೆ ವಿವರಿಸಿರುವ ಸಮೀಕ್ಷೆಗಳಲ್ಲಿ ವಿಶ್ವವಿದ್ಯಾನಿಲಯದಲ್ಲಿ ಸದರಿ ವಿಷಯಗಳಿಗೆ ಸಂಬಂಧಿಸಿದಂತೆ ಅಧ್ಯಯನ ನಡೆಸುತ್ತಿರುವ ಅಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ತಾಲ್ಲೂಕು ಮಟ್ಟಗಳಲ್ಲಿ ಹಾಗೂ ಜಿಲ್ಲಾ ಮಟ್ಟಗಳಲ್ಲಿ ಟ್ರಾನ್ಸ್ ಜೆಂಡರ್ಸ್ ಹಾಗೂ ಮಾಜಿ ದೇವದಾಸಿ ಮಹಿಳೆಯರ ಸರ್ವೆ ಕಾರ್ಯದ ಪ್ರಚಾರವನ್ನು ದೇವದಾಸಿ ಪುನರ್ ವಸತಿ ಯೋಜನಾಧಿಕಾರಿಗಳು ಹಾಗೂ ಅಭಿವೃದ್ಧಿ ನಿರೀಕ್ಷಕರುಗಳ ಸಹಯೋಗದೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ಹಾಗೂ ಎರಡೂ ಸಮೀಕ್ಷೆಗಳು ಪೂರ್ಣಗೊಂಡ ಬಳಿಕ ಸಮೀಕ್ಷಾ ವರದಿಗಳ ವಿಶ್ಲೇಷಣೆ ಕಾರ್ಯದಲ್ಲಿ ತಮ್ಮ ಸಲಹೆ ಸೂಚನೆಗಳನ್ನು ನೀಡಬಹುದಾಗಿದೆ ಎಂದು ತಿಳಿಸಿರುತ್ತಾರೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸದರಿ ಮಾಹಿತಿಯನ್ನು ತಮ್ಮ ವಿಭಾಗದಲ್ಲಿ ಅಧ್ಯಯನ ನಡೆಸುತ್ತಿರುವ ಅಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರುತ್ತಾ, ಸದರಿ ಸಮೀಕ್ಷೆಗಳ ಪ್ರಯೋಜನ ಪಡೆಯಲು ಈ ಮೂಲಕ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ **ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, (ಕರ್ನಾಟಕ ಸರ್ಕಾರದ ಒಂದು ಉದ್ಯಮ), ಕರ್ನಾಟಕ ಪ್ರಾದೇಶಿಕ ಕೃಷಿಕ ಸಮಾಜ, ನಂ.18, ಕೃಷಿ ಭವನ, 2ನೇ ಮಹಡಿ, ನೃಪತುಂಗ ರಸ್ತೆ, ಬೆಂಗಳೂರು– 560001** ಇವರನ್ನು ಸಂಪರ್ಕಿಸುವುದು.

15/9/25

ನಿರ್ದೇಶಕರು–ಸಂಶೋಧನೆ

**ನಿರ್ದೇಶಕರು - ಸಂಶೋಧನೆ**
**ತುಮಕೂರು ವಿಶ್ವವಿದ್ಯಾನಿಲಯ**
**ತುಮಕೂರು**

ಮ.ತಿ.ನೋ

ಅಡಕ: ಸರ್ಕಾರದ ಪತ್ರ.

ಇವರಿಗೆ,

1. ಅಧ್ಯಕ್ಷರು, ಡಾ. ಡಿ.ವಿ. ಗುಂಡಪ್ಪ ಕನ್ನಡ ಅಧ್ಯಯನ ಕೇಂದ್ರ, ತು.ವಿ.ತು.
2. ಅಧ್ಯಕ್ಷರು, ಸ್ನಾತಕೋತ್ತರ ಇಂಗ್ಲೀಷ್ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
3. ಅಧ್ಯಕ್ಷರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
4. ಅಧ್ಯಕ್ಷರು, ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
5. ಅಧ್ಯಕ್ಷರು, ಸ್ನಾತಕೋತ್ತರ ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು
6. ಅಧ್ಯಕ್ಷರು, ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
7. ಸಂಯೋಜಕರು, ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತು.ವಿ.ತು.
8. ಸಂಯೋಜಕರು, ಸ್ನಾತಕೋತ್ತರ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗ, ತು.ವಿ.ತು.

ಸದರಿ ಮಾಹಿತಿಯನ್ನು ತಮ್ಮ ವಿಭಾಗದ ಅಧೀನದಲ್ಲಿರುವ ಅಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸತಕ್ಕದ್ದು)
4. ಕಛೇರಿ ಪ್ರತಿ.

ಎನ್. ಮಹೇಶ್ ಬಾಬು ಕ.ಆ.ಸೇ. (ಸೂಪರ್ ಟೈಂ ಸ್ಕೇಲ್)
ವ್ಯವಸ್ಥಾಪಕ ನಿರ್ದೇಶಕರು
ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ಕರ್ನಾಟಕ ಪ್ರದೇಶ ಕೃಷಿಕ ಸಮಾಜ,
ನಂ. 18, ಕೃಷಿ ಭವನ, 02ನೇ ಮಹಡಿ,
ನೃಪತುಂಗ ರಸ್ತೆ, ಬೆಂಗಳೂರು – 560 001.

ಕರ್ನಾಟಕ ಸರ್ಕಾರ

ಕರ್ಮಣಿ
KARMANI

N. Mahesh Babu K.A.S. (Super Time Scale)
Managing Director
Karnataka State Women's Development Corporatio
(Govt. of Karnataka Undertaking)
Karnataka Pradesh Krishik Samaj
No. 18, Krishi Bhavan, 2nd Floor,
Nrupatunga Road, Bengaluru - 560 001

ಕಡತ ಸಂಖ್ಯೆ: ಮಅನಿ/ದೇ.ಪು.ಯೋ/ಟಿ.ಜಿ/ಸರ್ವೆ/3/2025-26 518 ದಿನಾಂಕ: 20.08.2025

ಮಾನ್ಯರೇ,

ವಿಷಯ: ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಹಾಗೂ ಟ್ರಾನ್ಸ್ ಜೆಂಡರ್ಸ್ ರವರ ಬೇಸ್ ಲೈನ್ ಸರ್ವೆಯಲ್ಲಿ ತಮ್ಮ ವಿಶ್ವವಿದ್ಯಾಲಯಗಳ ಪ್ರಾಧ್ಯಾಪಕರು ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಇತರರು ಸಕ್ರಿಯವಾಗಿ ಪಾಲ್ಗೊಳ್ಳುವ ಕುರಿತು.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮೊದಲ ಬಾರಿಗೆ ರಾಜ್ಯಾದ್ಯಂತ **ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆ** ಹಾಗೂ 15 ಜಿಲ್ಲೆಗಳಲ್ಲಿ **ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ** (ಬೆಳಗಾವಿ, ವಿಜಯಪುರ, ಬಾಗಲಕೋಟೆ, ರಾಯಚೂರು, ಕೊಪ್ಪಳ, ಧಾರವಾಡ, ಹಾವೇರಿ, ಗದಗ, ಕಲಬುರ್ಗಿ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ಬಳ್ಳಾರಿ ಮತ್ತು ವಿಜಯನಗರ) ಯನ್ನು ಸದರಿಯವರ ಸಾಮಾಜಿಕ, ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿ ಸಂಗ್ರಹಿಸಿ, ಪುನರ್ವಸತಿ (ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ) ಕಲ್ಪಿಸಲು ಸಮೀಕ್ಷೆಗಳನ್ನು ನಡೆಸಲಾಗುವುದು.

ಎರಡು ಸಮೀಕ್ಷೆಗಳನ್ನು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ನಡೆಸಲಾಗುವುದು. ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳೊಂದಿಗೆ, ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯನ್ನು ರಾಜ್ಯದ ಎಲ್ಲಾ ತಾಲ್ಲೂಕು ಸರ್ಕಾರಿ ಆಸ್ಪತ್ರೆಗಳು ಮತ್ತು ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಸಲಾಗುತ್ತದೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯನ್ನು 15 ಜಿಲ್ಲೆಗಳ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ನಡೆಸಲಾಗುತ್ತದೆ.

ಲಿಂಗತ್ವ ಅಲ್ಪಸಂಖ್ಯಾತರ ಸಮುದಾಯದವರ ಮೂಲಕವೇ ಸಮೀಕ್ಷೆ ಕಾರ್ಯ ಕೈಗೊಳ್ಳುತ್ತಿರುವುದು ಸದರಿ ಸಮೀಕ್ಷೆಯ ವಿಶೇಷತೆಯಾಗಿದೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಸಮೀಕ್ಷೆಯನ್ನು ಕೈಗೊಳ್ಳಲು ಗುರುತಿಸಲಾಗಿರುವ ಸಮೀಕ್ಷಾದಾರರಿಗೆ ಹಾಗೂ ದೇವದಾಸಿ ಪುನರ್ವಸತಿ ಯೋಜನಾ ಘಟಕದ ಅಧಿಕಾರಿ ಸಿಬ್ಬಂದಿಗಳು ಸದರಿ ಸಮೀಕ್ಷೆಯನ್ನು ಕೈಗೊಳ್ಳುತ್ತಾರೆ. ಸದರಿ ಸಮೀಕ್ಷೆದಾರರುಗಳಿಗೆ ವಿವಿಧ ಹಂತದ ತರಬೇತಿಯನ್ನು ನೀಡಲಾಗಿರುತ್ತದೆ.

ಎರಡು ಸಮೀಕ್ಷೆಗಳನ್ನು ಸೆಪ್ಟೆಂಬರ್ 10 ರಿಂದ ಪ್ರಾರಂಭಿಸಿ, 45 ಕಛೇರಿ ಕೆಲಸದ ದಿನಗಳಲ್ಲಿ (working days) ಮುಕ್ತಾಯಗೊಳಿಸಲಾಗುವುದು.

ಅದರಂತೆ ತಮ್ಮ ವಿಶ್ವವಿದ್ಯಾಲಯಗಳಲ್ಲಿ ಸದರಿ ವಿಷಯಗಳ ಬಗ್ಗೆ ಅಧ್ಯಯನ ನಡೆಸುತ್ತಿರುವ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಹಾಗೂ ಇತರರು ಸ್ವಯಂ ಪ್ರೇರಿತರಾಗಿ ತಾಲ್ಲೂಕ ಮಟ್ಟಗಳಲ್ಲಿ ಹಾಗೂ ಜಿಲ್ಲಾ ಮಟ್ಟಗಳಲ್ಲಿ ಟ್ರಾನ್ಸ್ ಜೆಂಡರ್ಸ್ ಹಾಗೂ ಮಾಜಿ ದೇವದಾಸಿ

ಕುಲಪತಿಗಳ ಕಾರ್ಯಾಲಯ
ಕ್ರ.ಸಂ. 077
ದಿನಾಂಕ 10/9/25

ಮಹಿಳೆಯರ ಸರ್ವೆ ಕಾರ್ಯದ ಪ್ರಚಾರವನ್ನು ದೇವದಾಸಿ ಪುನರ್ವಸತಿ ಯೋಜನೆಯ ಯೋಜನಾಧಿಕಾರಿಗಳು ಹಾಗೂ ಅಭಿವೃದ್ಧಿ ನಿರೀಕ್ಷಕರುಗಳ ಸಹಯೋಗದೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ಹಾಗೂ ಎರಡೂ ಸಮೀಕ್ಷೆಗಳು ಪೂರ್ಣಗೊಂಡ ಬಳಿಕ ಸಮೀಕ್ಷಾ ವರದಿಗಳ ವಿಶ್ಲೇಷಣೆ ಕಾರ್ಯದಲ್ಲಿ ತಮ್ಮ ಸಲಹೆ ಸೂಚನೆಗಳನ್ನು ನೀಡಲು ಕೋರಿದೆ.

ತಮ್ಮ ವಿಶ್ವಾಸಿ

10/8/14

ಗೆ,

Raichur University,

Yeragera, Raichur.

Karnataka - 584133.